**Akashvani : Bangalore**
**National Bulletin In Kannada**
**14.03.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**14.03.2025 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ದೇಶಾದ್ಯಂತ ಸಡಗರದಿಂದ ಹೋಳಿ ಹಬ್ಬ ಆಚರಣೆ; ಪರಸ್ಪರ ಬಣ್ಣ ಹಚ್ಚಿ ಸಂಭ್ರಮಿಸಿದ ಜನತೆ**

**೨. ಉಪಗ್ರಹಗಳ ಉಡಾವಣೆ ಮೂಲಕ ೧೪೩ ದಶಲಕ್ಷ ಅಮೆರಿಕನ್ ಡಾಲರ್ ಆದಾಯ ಗಳಿಸಿದ ಇಸ್ರೋ**

**೩. ಆದ್ಯತಾ ವಲಯದ ಸಾಲದಲ್ಲಿ ನವೀಕರಿಸಬಹುದಾದ ಇಂಧನ ಯೋಜನೆ ಸೇರ್ಪಡೆ ಮೂಲಕ ಹಣಕಾಸು ನೆರವು - ಆರ್‌ಬಿಐ**

**೪. ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಲಕ್ಷ್ಯ ಸೇನ್‌ಗೆ ಸೋಲು**

**<><*<><>*><>**

ಬಣ್ಣಗಳ ಹಬ್ಬವಾದ ಹೋಳಿಯನ್ನು ಇಂದು ದೇಶಾದ್ಯಂತ ಸಾಂಪ್ರದಾಯಿಕ ಉತ್ಸಾಹ ಮತ್ತು ಸಂತಸದಿಂದ ಆಚರಿಸಲಾಯಿತು. ಈ ಹಬ್ಬವು ವಸಂತಕಾಲದ ಆಗಮನವನ್ನು ಸೂಚಿಸುತ್ತದೆ. ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಂಕೇತಿಸುತ್ತದೆ ಮತ್ತು ಏಕತೆ ಮತ್ತು ಸಾಮರಸ್ಯದ ಮನೋಭಾವವನ್ನು ಬೆಳೆಸುತ್ತದೆ. ಇದು ಜಾತಿ, ಮತ, ವಯಸ್ಸು ಮತ್ತು ಲಿಂಗದ ಅಡೆತಡೆಗಳನ್ನು ಮೀರಿ ಒಗ್ಗಟ್ಟು, ಸಮಾನತೆ ಮತ್ತು ಭ್ರಾತೃತ್ವದ ಆಚರಣೆಯಲ್ಲಿ ಜನರನ್ನು ಒಟ್ಟುಗೂಡಿಸುತ್ತದೆ. ಹೋಳಿ ಹಬ್ಬಕ್ಕೆ ಒಂದು ದಿನ ಮೊದಲು ಆಚರಿಸಲಾಗುವ ಕಾಮ ದಹನನೊಂದಿಗೆ ಹಬ್ಬ ನಿನ್ನೆಯಿಂದಲೇ ಪ್ರಾರಂಭವಾಗಿವೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಹೋಳಿ ಹಬ್ಬದ ಸಂದರ್ಭದಲ್ಲಿ ದೇಶದ ನಾಗರಿಕರಿಗೆ ಶುಭಾಶಯಗಳನ್ನು ಕೋರಿದ್ದಾರೆ. ಹಬ್ಬವು ಸಂತೋಷ ಮತ್ತು ಉತ್ಸಾಹವನ್ನು ತರುತ್ತದೆ ಎಂದು ಅವರು ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಕೂಡ, ರಾಷ್ಟ್ರದ ಜನತೆಗೆ ಶುಭ ಕೋರಿದ್ದಾರೆ. ಹೋಳಿ ದುಷ್ಟರ ಮೇಲೆ ಶಿಷ್ಟರ ವಿಜಯ ಹಾಗೂ ವಸಂತಕಾಲದ ಆಗಮನವನ್ನು ಸೂಚಿಸುತ್ತದೆ. ಇದು ಹೊಸ ಆರಂಭ ಮತ್ತು

ಹೊಸ ದೃಷ್ಟಿಕೋನಗಳನ್ನು ಸಂಕೇತಿಸುತ್ತದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಜನತೆಗೆ ಹೋಳಿ ಹಬ್ಬದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು, ಉತ್ಸಾಹ ಮತ್ತು ಸಂತೋಷದಿಂದ ತುಂಬಿದ ಈ ಹಬ್ಬವು ಪ್ರತಿಯೊಬ್ಬರ ಜೀವನದಲ್ಲಿ ಹೊಸ ಹುರುಪು ಮತ್ತು ಶಕ್ತಿಯನ್ನು ತರುತ್ತದೆ. ದೇಶವಾಸಿಗಳಲ್ಲಿ ಏಕತೆಯನ್ನು ಬಲಪಡಿಸುತ್ತದೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ, ಉಪಗ್ರಹ ಉಡಾವಣೆ ಮೂಲಕ ಸುಮಾರು ೧೪೩ ದಶಲಕ್ಷ ಅಮೆರಿಕನ್ ಡಾಲರ್ ವಿದೇಶಿ ವಿನಿಮಯ ಆದಾಯ ಗಳಿಸಿದೆ. ಕಳೆದ ದಶಕದಲ್ಲಿ ಇಸ್ರೋ ಒಟ್ಟು ೩೯೩ ವಿದೇಶಿ ಉಪಗ್ರಹಗಳು ಮತ್ತು ೩ ಭಾರತೀಯ ಗ್ರಾಹಕ ಉಪಗ್ರಹಗಳನ್ನು ವಾಣಿಜ್ಯ ಆಧಾರದ ಮೇಲೆ ಉಡಾವಣೆ ಮಾಡಿದೆ ಎಂದು ಬಾಹ್ಯಾಕಾಶ ಇಲಾಖೆ ತಿಳಿಸಿದೆ. ೨೦೧೫ ಜನವರಿಯಿಂದ ೨೦೨೪ ರ ಡಿಸೆಂಬರ್ ನಡುವೆ, ಈ ಉಪಗ್ರಹಗಳನ್ನು ಇಸ್ರೋದ ಪಿಎಸ್‌ಎಲ್‌ವಿ, ಎಲ್‌ವಿಎಂ೩ ಮತ್ತು ಎಸ್‌ಎಸ್‌ಎಲ್‌ವಿ ಉಡಾವಣಾ ವಾಹನಗಳಲ್ಲಿ ಯಶಸ್ವಿಯಾಗಿ ಉಡಾವಣೆ ಮಾಡಲಾಗಿದೆ. ಅಮೆರಿಕಾ, ಬ್ರಿಟನ್, ಸಿಂಗಾಪುರ ಸೇರಿದಂತೆ ೩೪ ದೇಶಗಳ ಉಪಗ್ರಹಗಳನ್ನು ಇಸ್ರೋ ಉಡಾವಣೆ ಮಾಡಿದೆ.

**<><*<><>*><>**

ಹವಾಮಾನ ಬದಲಾವಣೆಯ ವಿರುದ್ಧದ ಹೋರಾಟದಲ್ಲಿ ಕಡಿಮೆ ಇಂಗಾಲದ ಆರ್ಥಿಕತೆಗೆ ದೇಶದ ಪರಿವರ್ತನೆಯನ್ನು ವೇಗಗೊಳಿಸಲು ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಆದ್ಯತೆಯ ವಲಯದ ಸಾಲದಲ್ಲಿ ಸೇರಿಸುವ ಮೂಲಕ ಅವುಗಳಿಗೆ ಹಣಕಾಸು ನೆರವು ಒದಗಿಸುವಲ್ಲಿ ಭಾರತ ಮುಂಚೂಣಿಯಲ್ಲಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ. ನವದೆಹಲಿಯಲ್ಲಿ ಹವಾಮಾನ ಬದಲಾವಣೆಯ ಅಪಾಯಗಳು ಮತ್ತು ಹಣಕಾಸು ಕುರಿತ ನೀತಿ ವಿಚಾರ ಸಂಕಿರಣವನ್ನು ಉದ್ದೇಶಿಸಿ ಮಾತನಾಡಿದ ಅವರು, ಮುಂದುವರಿದ ಆರ್ಥಿಕತೆಯ ದೇಶಗಳಲ್ಲಿ ಕೇಂದ್ರ ಬ್ಯಾಂಕ್‌ಗಳು ಸಾಂಪ್ರದಾಯಿಕವಾಗಿ ಆಸ್ತಿ ತಟಸ್ಥ ವಿಧಾನವನ್ನು ಅನುಸರಿಸುತ್ತಿವೆ. ಮತ್ತೊಂದೆಡೆ ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ಆರ್ಥಿಕತೆಗಳಲ್ಲಿನ ಕೇಂದ್ರ ಬ್ಯಾಂಕ್‌ಗಳು, ತಮ್ಮ ದೇಶದ ಸಂದರ್ಭಗಳು ಮತ್ತು ಅಭಿವೃದ್ಧಿ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು ನಿರ್ದೇಶಿತ ಸಾಲ ನೀತಿಗಳನ್ನು ಅಳವಡಿಸಿಕೊಂಡಿವೆ ಎಂದರು. ಭಾರತದ ಆದ್ಯತೆಯ ವಲಯದ ಸಾಲ ಮಾರ್ಗಸೂಚಿಗಳು ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ-ಸೌರ, ಜೀವರಾಶಿ ಆಧಾರಿತ, ಗಾಳಿಯಂತ್ರಗಳು, ಮೈಕ್ರೋ-ಜಲವಿದ್ಯುತ್ ಸ್ಥಾವರಗಳು ಮತ್ತು ಸಾಂಪ್ರದಾಯಿಕವಲ್ಲದ ಇಂಧನ ಆಧಾರಿತ ಸಾರ್ವಜನಿಕ

ಉಪಯುಕ್ತತೆಗಳಾದ ಬೀದಿ ದೀಪ ವ್ಯವಸ್ಥೆಗಳು ಮತ್ತು ದೂರದ ಹಳ್ಳಿಗಳ ವಿದ್ಯುದ್ದೀಕರಣ ಯೋಜನೆಗಳಿಗೆ ಆದ್ಯತೆಯ ವಲಯದ ಸಾಲದ ಭಾಗವಾಗಿ ಹಣಕಾಸು ನೆರವು ನೀಡಲು ಅನುಕೂಲ ಮಾಡಿಕೊಡುತ್ತವೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ವಿವರಿಸಿದರು.

**<><*<><>*><>**

ದೇಶವು ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಈಶಾನ್ಯವು ಪ್ರಮುಖ ಚಾಲಕ ಶಕ್ತಿಯಾಗಿದ್ದು, ಈ ಪ್ರದೇಶವು ದೇಶದ ಮುಂದಿನ ಕೇಸರಿ ಕೃಷಿಯ ಕೇಂದ್ರವಾಗಲಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ಮಹತ್ವಾಕಾಂಕ್ಷೆಯ ಯೋಜನೆಗಾಗಿ, ಶಿಲ್ಲಾಂಗ್‌ನಲ್ಲಿರುವ ಈಶಾನ್ಯ ತಂತ್ರಜ್ಞಾನ ಅನ್ವಯಿಕೆ ಮತ್ತು ಸಂಶೋಧನಾ ಕೇಂದ್ರ-ನೆಕ್ಟರ್‌ನ ನೂತನ ಕ್ಯಾಂಪಸ್‌ಗೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ 'ಮಿಷನ್ ಕೇಸರಿ' ಉಪಕ್ರಮವು ೨೦೨೧ ರಿಂದ ಸಿಕ್ಕಿಂ, ಅರುಣಾಚಲ ಪ್ರದೇಶ ಮತ್ತು ಮೇಘಾಲಯದಲ್ಲಿ ಕೇಸರಿ ಕೃಷಿಯನ್ನು ವಿಸ್ತರಿಸಿದೆ ಎಂದರು.  ಅರುಣಾಚಲ ಪ್ರದೇಶದ ಮೆಂಚುಖಾ ಮತ್ತು ಸಿಕ್ಕಿಂನ ಯುಕ್ಸೋಮ್‌ನಲ್ಲಿ ಈಗ ದೊಡ್ಡ ಪ್ರಮಾಣದ ಕೇಸರಿ ಕೃಷಿ ನಡೆಯುತ್ತಿದೆ. ಇದನ್ನು ನಾಗಾಲ್ಯಾಂಡ್ ಮತ್ತು ಮಣಿಪುರಕ್ಕೂ ವಿಸ್ತರಿಸುವ ಯೋಜನೆಗಳಿವೆ ಎಂದು ಡಾ. ಜಿತೇಂದ್ರ ಸಿಂಗ್ ತಿಳಿಸಿದರು.  ಇದು ಜಮ್ಮು ಮತ್ತು ಕಾಶ್ಮೀರದ ಪಂಪೋರ್ ನಂತರ ಈಶಾನ್ಯ ಪ್ರದೇಶವನ್ನು ಭಾರತದ ಮುಂದಿನ ಕೇಸರಿ ಕೃಷಿ ಕೇಂದ್ರವಾಗಿ ಪರಿವರ್ತಿಸುತ್ತದೆ. ಈ ಉಪಕ್ರಮದಡಿ  ಕೃಷಿಯೇತರ ಭೂಮಿಯನ್ನು ಇದಕ್ಕಾಗಿ ಬಳಸಿಕೊಳ್ಳಲಾಗುತ್ತದೆ. ಅಲ್ಲದೇ ಅಸ್ತಿತ್ವದಲ್ಲಿರುವ ಬೆಳೆಗಳಿಗೆ ಅಡ್ಡಿಯಾಗದಂತೆ ಕೃಷಿ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ಸಚಿವರು ಹೇಳಿದರು.

**ಧ್ವನಿ: ಸಚಿವ ಜಿತೇಂದ್ರ ಸಿಂಗ್ ( ೧೯ ಸೆಕೆಂಡ್‌ಗಳು)**

**<><*<><>*><>**

ಮೂರು ದಿನಗಳ ಭೇಟಿಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಂಜೆ ಅಸ್ಸಾಂಗೆ ಆಗಮಿಸಿದ್ದಾರೆ.  ಅತ್ಯಾಧುನಿಕ ಲಚಿತ್ ಬರ್ಫುಕನ್ ಪೊಲೀಸ್ ಅಕಾಡೆಮಿಯ ಉದ್ಘಾಟನೆ ಮತ್ತು ಪೊಲೀಸ್ ಅಕಾಡೆಮಿಯ ವಸತಿ ಯೋಜನೆಗಳಿಗೆ ನಾಳೆ ಬೆಳಗ್ಗೆ ಸಚಿವ ಅಮಿತ್ ಶಾ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಂತರ ಅವರು ಮಿಜೋರಾಂಗೆ ತೆರಳಲಿದ್ದಾರೆ. ಮಧ್ಯಾಹ್ನ ಮಿಜೋರಾಂನ ಐಜ್ವಾಲ್‌ನಲ್ಲಿ ಅಸ್ಸಾಂ ರೈಫಲ್ಸ್ ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಸಚಿವರು ಭಾಗವಹಿಸಲಿದ್ದಾರೆ. ಭಾನುವಾರ ಅವರು ಕೊಕ್ರಝಾರ್ ಜಿಲ್ಲೆಯ ದೋಟ್ಮಾದಲ್ಲಿ ಆಲ್ ಬೋಡೋ ವಿದ್ಯಾರ್ಥಿ ಸಂಘಟನೆಯ ೫೭ನೇ ವಾರ್ಷಿಕ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಬಳಿಕ ಗುವಾಹಟಿಯಲ್ಲಿ ಈಶಾನ್ಯ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಹೊಸ ಕ್ರಿಮಿನಲ್ ಕಾನೂನುಗಳ ಅನುಷ್ಠಾನದ ಪ್ರಗತಿಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಪರಿಶೀಲಿಸಲಿದ್ದಾರೆ.

**<><*<><>*><>**

ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರದೇಶದ ಮೌಲಾನಾ ಅಬ್ದುಲ್ ಅಜೀಜ್ ಮಸೀದಿಯಲ್ಲಿ ಇಂದು ಮಧ್ಯಾಹ್ನ ಪ್ರಾರ್ಥನೆಯ ಸಮಯದಲ್ಲಿ ಸಂಭವಿಸಿದ ಪ್ರಬಲ ಬಾಂಬ್ ಸ್ಫೋಟದಲ್ಲಿ ಸ್ಥಳೀಯ ಇಸ್ಲಾಮಿಕ್ ನಾಯಕ ಮತ್ತು ಮಕ್ಕಳು ಸೇರಿದಂತೆ ಮೂವರು ಗಾಯಗೊಂಡಿದ್ದಾರೆ. ಮಸೀದಿಯ ಪ್ರವಚನಪೀಠದೊಳಗೆ ಸುಧಾರಿತ ಸ್ಫೋಟಕ ಸಾಧನ-ಐಇಡಿ ಇರಿಸಲಾಗಿತ್ತು. ಗಾಯಾಳುಗಳನ್ನು ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.

**<><*<><>*><>**

ಪರಸ್ಪರ ಪ್ರಯೋಜನಕಾರಿ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ಅವರೊಂದಿಗೆ ಚರ್ಚೆಗೆ ಎದುರು ನೋಡುತ್ತಿದ್ದೇನೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಸಾಮಾಜಿಕ ಜಲತಾಣದ ಪೋಸ್ಟ್‌ನಲ್ಲಿ ಅವರು, ಕೇಂದ್ರ ಸರ್ಕಾರದ ವಿಧಾನವು ಭಾರತ ಮೊದಲು, ವಿಕಸಿತ ಭಾರತ್ ಮತ್ತು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಿಂದ ಮಾರ್ಗದರ್ಶಿಸಲ್ಪಡುತ್ತದೆ ಎಂದರು. ಕಳೆದ ವಾರ, ಪಿಯೂಷ್ ಗೋಯಲ್ ವಾಷಿಂಗ್ಟನ್‌ಗೆ ಭೇಟಿ ನೀಡಿ ಅಮೆರಿಕದ ವಾಣಿಜ್ಯ ಸಚಿವರೊಂದಿಗೆ ಮಾತುಕತೆ ನಡೆಸಿದರು. ಭಾರತ ಮತ್ತು ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಮಾತುಕತೆ ನಡೆಸಲು ಯೋಜಿಸುತ್ತಿರುವುದರಿಂದ ಈ ಚರ್ಚೆಗಳು ಮಹತ್ವದ್ದಾಗಿವೆ.

**<><*<><>*><>**

ಇತ್ತೀಚೆಗೆ ಪಾಕಿಸ್ತಾನದ ಬಲುಚಿಸ್ತಾನದಲ್ಲಿ ಜಾಫರ್ ಎಕ್ಸ್‌ಪ್ರೆಸ್ ರೈಲು ಅಪಹರಣದಲ್ಲಿ ಭಾರತ ಭಾಗಿಯಾಗಿದೆ ಎಂಬ ಪಾಕಿಸ್ತಾನದ ಆರೋಪಗಳು ಆಧಾರರಹಿತ ಎಂದು ಭಾರತ ಹೇಳಿದೆ. ಪಾಕಿಸ್ತಾನದ ಹೇಳಿಕೆಗಳ ಕುರಿತು ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನದ ಆಧಾರರಹಿತ ಆರೋಪಗಳನ್ನು ಭಾರತ ಬಲವಾಗಿ ತಿರಸ್ಕರಿಸುತ್ತದೆ ಎಂದು ಹೇಳಿದ್ದಾರೆ.

**<><*<><>*><>**

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಮೊದಲ ಆರೋಪಿ ನಟಿ ರನ್ಯಾ ರಾವ್ ಜಾಮೀನು ಅರ್ಜಿಯನ್ನು ಬೆಂಗಳೂರಿನ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಎರಡನೇ

ಆರೋಪಿ ತರುಣ್‌ರಾಜ್‌ಗೆ ಬೆಂಗಳೂರಿನ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ.

<><*<><>*><>

ಉಕ್ರೇನ್ ವಿರುದ್ಧ ನಡೆಸಲಾಗುತ್ತಿರುವ ಸಂಘರ್ಷದ ಬಗ್ಗೆ ನಿರಂತರ ಗಮನಹರಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೇರಿದಂತೆ ಹಲವಾರು ವಿಶ್ವ ನಾಯಕರಿಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಕೃತಜ್ಞತೆ ಸಲ್ಲಿಸಿದ್ದಾರೆ.

<><*<><>*><>

ಬರ್ಮಿಂಗ್ಹ್ಯಾಮ್‌ನಲ್ಲಿಂದು ನಡೆದ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಲಕ್ಷ್ಯ ಸೇನ್, ಚೀನಾದ ಲಿ ಶಿ ಫೆಂಗ್ ವಿರುದ್ಧ ೧೦-೨೧, ೧೬-೨೧ ನೇರ ಸೆಟ್‌ಗಳಿಂದ ಪರಾಭವಗೊಂಡಿದ್ದಾರೆ. ಇದೇ ವೇಳೆ, ಮಹಿಳಾ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಚೀನಾದ ಲಿಯು ಶೆಂಗ್ಶು ಮತ್ತು ಟ್ಯಾನ್ ನಿಂಗ್ ಜೋಡಿ ವಿರುದ್ಧ ೧೪-೨೧, ೧೦-೨೧ ಸೆಟ್‌ಗಳಿಂದ ಭಾರತದ ತ್ರಿಷಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಸೋಲನುಭವಿಸಿದ್ದಾರೆ.

<><*<><>*><>

ಮಾರಿಷಸ್ ವಿದೇಶಾಂಗ ಸಚಿವ ಧನಂಜಯ್ ರಾಮ್‌ಫುಲ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ದಿಟ್ಟ ನಡೆಯನ್ನು ಶ್ಲಾಘಿಸಿದ್ದು, ಮುಂದಿನ ದಿನಗಳಲ್ಲಿ ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿ ವೇಗವಾಗಿ ಬೆಳೆಯುತ್ತಿದೆ ಎಂದು ಶ್ಲಾಘಿಸಿದ್ದಾರೆ. ಭಾರತವು ಮೂರನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯಾಗುವ ಹಾದಿಯಲ್ಲಿದೆ. ಇದಕ್ಕೆ ಪ್ರಧಾನಿ ಮೋದಿ ಅವರ ನಾಯಕತ್ವವೇ ಕಾರಣ ಎಂದು ಅವರು ಹೇಳಿದ್ದಾರೆ. ಭಾರತವು ಆರ್ಥಿಕ ಶಕ್ತಿಕೇಂದ್ರವಾಗಿ ಮಾತ್ರವಲ್ಲದೆ ಸೂಪರ್ ಪವರ್ ಆಗಿಯೂ ಹೊರಹೊಮ್ಮುತ್ತಿದೆ. ಮುಂಬರುವ ವರ್ಷಗಳಲ್ಲಿ, ಎಲ್ಲರ ಕಣ್ಣುಗಳು ಭಾರತದತ್ತ ಇರುತ್ತವೆ ಮತ್ತು ಮಾರಿಷಸ್ ದೇಶದೊಂದಿಗೆ ಅಂತಹ ವಿಶೇಷ ಸಂಬಂಧವನ್ನು ಹೊಂದಲು ತುಂಬಾ ಗೌರವವಿದೆ ಎಂದು ರಾಮ್‌ಫುಲ್ ಹೇಳಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**